O.S. No.77/2023 -PW-1

ದಿಃ 18-07-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀ ಸಿ ವಿ ಎನ್ ವಕೀಲರಿಂದ.

ಈ ದಾವೆಯಲ್ಲಿ ನಾನು 1 ನೇ ವಾದಿಯಾಗಿದ್ದು, ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಲಯಕ್ಕೆ ಸರ್ವೇ ನಂಬರ 1/2 ರ 2022-20 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಎಮ್ ಇ ನಂಬರ 1358 ರ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು, ಎಮ್ ಆರ್ ನಂಬರ ಎಚ್ 12/2013-2014 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು, ದಿನಾಂಕ 19-05-1989 ರ ಜೀವಂತ ಉತ್ತರ ಜೀವಿಗಳ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂದು, ದಿನಾಂಕ 15-03-1988 ರಂದು ತಹಶೀಲ್ದಾರ ಹಳಿಯಾಳ ರವರು ನನ್ನ ತಾಯಿಗೆ ಕಳುಹಿಸಿದ ನೋಟೀಸ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು, 10 ಕಂದಾಯ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 6 ರಿಂದ 15 ಎಂದು, ಖಾತೆ ನಂಬರ 138 ಕ್ಕೆ ಸಂಬಂಧಿಸಿದ ಕಂದಾಯ ಪಾವತಿಯ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 16 ಎಂದು, ನನ್ನ ತಾಯಿಯ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 17 ಎಂದು ಗುರುತಿಸಲಾಯಿತು. ಆದ್ದರಿಂದ ನನ್ನ ದಾವೆಯನ್ನು ಡಿಕ್ರಿ ಮಾಡಲು ಕೋರುತ್ತೇನೆ.

**ಪಾಟೀ ಸವಾಲು :** ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

O.S. No.77/2023 -PW-1

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.